ಆ) ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಖಾಲಿಯಿರುವ ಪೂರ್ಣಕಾಲಿಕ ಉಪನ್ಯಾಸಕರ ಹುದ್ದೆಗೆದುರಾಗಿ ಅರೆಕಾಲಿಕ ಉಪನ್ಯಾಸಕರುಗಳನ್ನು ನೇಮಕ ಮಾಡಿಕೊಂಡಿರುವುದರಿಂದ ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆಯಾಗದಂತೆ ಎಚ್ಚರಿಕೆ ವಹಿಸಲಾಗಿದೆ.

ಇ) ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ 157 ಉಪನ್ಯಾಸಕರುಗಳ ಹುದ್ದೆಗಳನ್ನು ಕರ್ನಾಟಕ ಲೋಕ ಸೇವಾ ಆಯೋಗದಿಂದ ಭರ್ತಿ ಮಾಡಲು ಪಟ್ಟಿಯನ್ನು ಸಲ್ಲಿಸಲಾಗಿದ್ದು, ಕರ್ನಾಟಕ ಲೋಕಸೇವಾ ಆಯೋಗವು ಈಗಾಗಲೇ 76 ಉಪನ್ಯಾಸಕರುಗಳನ್ನು ಆಯ್ಕೆ ಮಾಡಿ, ಆಯ್ಕೆಗೊಂಡಿರುವ ಅಭ್ಯರ್ಥಿಗಳ ಪಟ್ಟಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತದೆ. ಸದರಿ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಪ್ರಕ್ರಿಯೆಯು ಸರ್ಕಾರದ ಪರಿಶೀಲನೆಯಲ್ಲಿದೆ.

2047 (2392) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) :– ಮಾನ್ಯ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಹಾಗೂ ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಕರ್ನಾಟಕ ರಾಜ್ಯಾದ್ಯಂತ ಕಾರ್ಯನಿರ್ವಹಿಸುತ್ತಿರುವ ಸಕ್ಕರೆ ಕಾರ್ಖಾನೆಗಳೆಷ್ಟು;

2) ದುರಸ್ತಿಗೊಳಗಾಗಿರುವ ಸಕ್ಕರೆ ಕಾರ್ಖಾನೆಗಳೆಷ್ಟು;

3) ಹಿಂದುಳಿದ ಗಡಿ ಪ್ರದೇಶ ಚಾಮರಾಜನಗರ ಜಿಲ್ಲೆಯು ಸೇರಿದಂತೆ ರಾಜ್ಯಾದ್ಯಂತ ಹೊಸದಾಗಿ ಸಕ್ಕರೆ ಕಾರ್ಖಾನೆಗಳನ್ನು ತೆರೆಯುವ ಉದ್ದೇಶ ಸರ್ಕಾರಕ್ಕೆ ಇದೆಯೇ;

4) ಚಾಮರಾಜನಗರ ಜಿಲ್ಲೆಯಲ್ಲಿ ಸಕ್ಕರೆ ಕಾರ್ಖಾನೆಯನ್ನು ತೆರೆಯಲಾಗುವುದೇ;

5) ದುರಸ್ತಿಗೊಳಗಾಗಿರುವ ಸಕ್ಕರೆ ಕಾರ್ಖಾನೆಗಳನ್ನು ಯಾವಾಗ ದುರಸ್ತಿ ಮಾಡಲಾಗುವುದು?

ಶ್ರೀ ಎಸ್.ಎ. ರವೀಂದ್ರನಾಥ್ (ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಹಾಗೂ ಸಕ್ಕರೆ ಸಚಿವರು):

1) ರಾಜ್ಯದಲ್ಲಿ 47 ಸಕ್ಕರೆ ಕಾರ್ಖಾನೆಗಳು ಕಾರ್ಯನಿರ್ವಹಿಸುತ್ತಿವೆ.

2) 8 ಸಕ್ಕರೆ ಕಾರ್ಖಾನೆಗಳು ಮುಚ್ಚಿರುತ್ತವೆ.

3) ಚಾಮರಾಜನಗರ ಜಿಲ್ಲೆಯ ಸಂತೇಮಾರಳ್ಳಿ ಹೋಬಳಿಯಲ್ಲಿ ಹೊಸ ಸಕ್ಕರೆ ಕಾರ್ಖಾನೆ ನಿರ್ಮಾಣಕ್ಕೆ ಅರ್ಜಿ ಬಂದಿದ್ದು, ಇದಲ್ಲದೆ ರಾಜ್ಯಾದ್ಯಂತ 28 ಹೊಸ ಸಕ್ಕರೆ ಕಾರ್ಖಾನೆಗಳ ಸ್ಥಾಪನೆಗೆ ಅರ್ಜಿಗಳನ್ನು ಸ್ವೀಕರಿಸಲಾಗಿದ್ದು, ಪರಿಶೀಲನೆಯಲ್ಲಿದೆ.

4) ಚಾಮರಾಜನಗರ ಜಿಲ್ಲೆಯಲ್ಲಿ ಶ್ರೀ ಮಹದೇಶ್ವರ ಸಕ್ಕರೆ ಕಾರ್ಖಾನೆಯು ಈಗಾಗಲೇ ಪುನರಾರಂಭಗೊಂಡಿದೆ. ಸಂತೇಮಾರಳ್ಳಿಯಲ್ಲಿ ಮತ್ತೊಂದು ಹೊಸ ಸಕ್ಕರೆ ಕಾರ್ಖಾನೆ ಸ್ಥಾಪನೆಗೆ ಪ್ರಸ್ತಾವನೆ ಸ್ವೀಕರಿಸಲಾಗಿದ್ದು, ಪರಿಶೀಲನೆಯಲ್ಲಿದೆ.

5) ರಾಜ್ಯದಲ್ಲಿ 8 ಸಕ್ಕರೆ ಕಾರ್ಖಾನೆಗಳು ಆರ್ಥಿಕ ಸಂಕಷ್ಟದಿಂದಾಗಿ ಮತ್ತು ಕಬ್ಬಿನ ಕೊರತೆಯಿಂದಾಗಿ ಮುಚ್ಚಿರುತ್ತವೆ. ಇವುಗಳಲ್ಲಿ 4 ಕಾರ್ಖಾನೆಗಳು ಸಹಕಾರಿ ರಂಗದ, 1 ಕಾರ್ಖಾನೆ ಜಂಟಿ ವಲಯದ ಮತ್ತು 3 ಕಾರ್ಖಾನೆಗಳು ಖಾಸಗಿ ವಲಯದ ಕಾರ್ಖಾನೆಗಳಾಗಿರುತ್ತವೆ.

ಸಹಕಾರಿ ವಲಯದ 4 ಕಾರ್ಖಾನೆಗಳನ್ನು ಖಾಸಗಿಯವರಿಗೆ ದೀರ್ಘಾವಧಿ ಗುತ್ತಿಗೆ ಆಧಾರದ ಮೇಲೆ ನೀಡಿ ಪುನಃಶ್ಚೇತನಗೊಳಿಸುವ ಪ್ರಕ್ರಿಯೆ ನಡೆಯುತ್ತಿದೆ. ಜಂಟಿ ವಲಯದ ಗಂಗಾವತಿ ಸಕ್ಕರೆ ಕಾರ್ಖಾನೆಗಳನ್ನು ಮುಚ್ಚಲಾಗಿದ್ದು, ಈ ಕಾರ್ಖಾನೆಯನ್ನು ಸಾಲ ವಸೂಲಾತಿ ನ್ಯಾಯಾಧಿಕರಣವು ಬಹಿರಂಗ ಹರಾಜು ಮೂಲಕ ಖಾಸಗಿಯವರಿಗೆ ಮಾರಾಟ ಮಾಡಿದ್ದು, ಹರಾಜು ಪ್ರಕ್ರಿಯೆ ವಿರುದ್ಧ ಕಾರ್ಖಾನೆಯ ಷೇರುದಾರರು ಸಾಲ ವಸೂಲಾತಿ ಮೇಲ್ಮನವಿ ನ್ಯಾಯಾಧಿಕರಣ ಚೆನ್ನೈ ಮುಂದೆ ಪ್ರಕರಣ ದಾಖಲಿಸಿದ್ದು, ಪ್ರಕರಣ ಬಾಕಿ ಇರುತ್ತದೆ.

ತುಂಗಭದ್ರಾ ಶುಗರ್ಸ್ (ಲಿ), (ದೇವಿ ಶುಗರ್ಸ್), ಶಿವಮೊಗ್ಗ, ಸುಂದರಿ ಶುಗರ್ಸ್, ಕಂಪ್ಲಿ, ಶಿರಗುಪ್ಪ ಶುಗರ್ಸ್, ಗೌರಿಬಿದನೂರು ಈ ಕಾರ್ಖಾನೆಗಳು ಖಾಸಗಿ ಕಾರ್ಖಾನೆಗಳಾಗಿದ್ದು, ಅವುಗಳ ಪುನಃಶ್ಚೇತನದ ಬಗ್ಗೆ ಕಾರ್ಖಾನೆಯ ಮಾಲೀಕರು ಅಗತ್ಯ ಕ್ರಮ ತೆಗೆದುಕೊಳ್ಳಬೇಕಾಗುತ್ತದೆ.

2048 (2507) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) :– ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಿಂದುಳಿದ ಗಡಿ ಪ್ರದೇಶ ಚಾಮರಾಜನಗರ ಜಿಲ್ಲೆಯೂ ಸೇರಿದಂತೆ ರಾಜ್ಯಾದ್ಯಂತ ಕಾರ್ಯನಿರ್ವಹಿಸುತ್ತಿರುವ ಸಕ್ಕರೆ ಹಾಗೂ ಖಾಸಗಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು;

ಆ) ಚಾಮರಾಜನಗರ ಜಿಲ್ಲೆಗೆ ಹೊಸದಾಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಮಂಜೂರು ಮಾಡಲಾಗುವುದೇ;

ಇ) ಹಾಗಿದ್ದಲ್ಲಿ, ಯಾವಾಗ ಮಂಜೂರಾತಿಯನ್ನು ನೀಡಲಾಗುವುದು?